ನಿಯಮಗಳ ಅಡಿ ಭರ್ತಿ ಮಾಡಲು ಅನುಮತಿ ನೀಡಿದ್ದು, ಇದರಲ್ಲಿ ಮೊದಲ ಹಂತವಾಗಿ 250 ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ 2ನೇ ಹಂತದಲ್ಲಿ 250 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೆಯೇ 2807 ಖಾಲಿ ಇರುವ ಅರೆ-ವೈದ್ಯಕೀಯ ಸಿಬ್ಬಂದಿಗಳನ್ನು ಭರ್ತಿ ಮಾಡುವ ಸಲುವಾಗಿ ವಿಶೇಷ ನೇರ ನೇಮಕಾಗಿ ಸಮಿತಿಯ ಮುಖಾಂತರ ಅರ್ಜಿ ಆಹ್ವಾನಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಖಾಲಿ ಹುದ್ದೆಗಳನ್ನು ಆದ್ಯತೆಯ ಮೇರೆ ತುಂಬಲಾಗುವುದು

ಇದಲ್ಲದೆ ಗುತ್ತಿಗೆ ಆಧಾರದ ಮೇಲೆ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ

ಈ) ನೇಮಕಾತಿ ಪ್ರಕ್ರಿಯೆ ಮುಗಿದ ಕೂಡಲೇ ಭರ್ತಿ ಮಾಡಲಾಗುವುದು

613(1063) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮಟಾ ತಾಲ್ಲೂಕಿನ ಗೋಕರ್ಣ ಹಾಗೂ ಆಸುಪಾಸಿನ ಗ್ರಾಮಗಳ ನಾಗರೀಕರಿಗಾಗಿ ಗೋಕರ್ಣದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಉನ್ನತೀಕರಿಸುವ ಅಗತ್ಯತೆಯನ್ನು ಸರ್ಕಾರ ಮನಗಂಡಿದೆಯೇ?

ಆ) ಗೋಕರ್ಣ ಹಾಗೂ ಆಸುಪಾಸಿನ 50 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ನಾಗರೀಕರಿಗೆ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಕೈಗೊಳ್ಳಲಾದ ಕ್ರಮವೇನು?

ಇ) ಹಾಗಿದ್ದಲ್ಲಿ ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).

ಅ) ಸರ್ಕಾರದ ಮುಂದೆ ಈ ಪ್ರಸ್ತಾವನೆ ಇದೆ ಅಗತ್ಯತೆ ಹಾಗೂ ಜನಸಂಖ್ಯೆಯನ್ನು ಆಧರಿಸಿ ಮಾರ್ಗಸೂಚಿ ಪ್ರಕಾರ ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು

ಆ) ಈ ನಿಟ್ಟಿನಲ್ಲಿ ಕುಮಟಾ ತಾಲ್ಲೂಕು ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ ಕುಮಟಾ ತಾಲ್ಲೂಕಿನ ಜನಸಂಖ್ಯೆ

145772 ಇದ್ದು ಒಂದು ಸಮುದಾಯ ಆರೋಗ್ಯ ಕೇಂದ್ರವಾಗಿ ಕುಮಟಾ ತಾಲ್ಲೂಕು ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದ್ದು, ನಾಗರೀಕರು ಆರೋಗ್ಯ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ

ಇ) ಮಾರ್ಗಸೂಚಿ ಪ್ರಕಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು

614 (1064) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮಟಾ ತಾಲ್ಲೂಕಿನಲ್ಲಿ ಉದ್ಯೋಗ ಪರ ವೃತ್ತಿಗಾಗಿ ಅಪೇಕ್ಷಿಸುವ ವಿದ್ಯಾರ್ಥಿಗಳಿಗಾಗಿ ಕೈಗಾರಿಕಾ ತರಬೇತಿ ಸಂಸ್ಥೆ (ಐ ಟಿ ಐ)ಯನ್ನು ಸ್ಥಾಪಿಸುವ ಅಗತ್ಯವನ್ನು ಸರ್ಕಾರ ಮನಗಂಡಿದೆಯೇ?

ಆ) ಹಾಗಿದ್ದಲ್ಲಿ, ಈ ಭಾಗದ ನಾಗರೀಕರ ಬಹುನಿರೀಕ್ಷಿತ ಐ ಟಿ ಐ ಯನ್ನು ಈವರೆಗೆ ಮಂಜೂರು ಮಾಡದಿರಲು ಕಾರಣವೇನು?

ಇ) ಹಾಗಿದ್ದಲ್ಲಿ, ಮಂಜೂರು ನೀಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ಹಾಗಿದ್ದಲ್ಲಿ ಯಾವಾಗ ಮಂಜೂರು ನೀಡಲಾಗುವುದು

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಹೌದು

ಆ) ಅನುದಾನದ ಕೊರತೆಯಿಂದ

ಇ) ಇಲ್ಲ

ಈ) ಅನುದಾನ ಲಭ್ಯತೆಯನ್ನು ಆಧರಿಸಿ ಪರಿಶೀಲಿಸಲ್ಪಡುತ್ತದೆ

615 (1065) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮಟಾ ತಾಲ್ಲೂಕಿನ ಪಶುಸಂಗೋಪನಾ ಇಲಾಖೆಯಲ್ಲಿ ಪಶುವೈದ್ಯರು ಹಾಗೂ ಸಿಬ್ಬಂದಿಗಳ ಬಹಳಷ್ಟು ಹುದ್ದೆಗಳು ಖಾಲಿ ಇರುವುದರಿಂದ ನಾಗರೀಕರಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರಿಂದಾಗಿ ಪಶುವೈದ್ಯಕೀಯ ಸೇವೆಯಲ್ಲಿ ಆಗುತ್ತಿರುವ ತೊಂದರೆಯನ್ನು ನಿವಾರಿಸಲು ಕೈಗೊಳ್ಳಲಾದ ಕ್ರಮಗಳೇನು?